ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20 : ದಿನಾಂಕ : 13–01–2020

# ಪತ್ರಿಕಾ ಆಮಂತ್ರಣ

1. ಬೆಂಗಳೂರು ಸಂಚಾರ ಪೊಲೀಸ್ ಮತ್ತು ಸಾರಿಗೆ ಇಲಾಖೆ ವತಿಯಿಂದ "31ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ – 2020" ಉದ್ಘಾಟನಾ ಸಮಾರಂಭ:

ಉದ್ಘಾಟನೆ
ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು.

ಗೌರವಾನ್ವಿತ ಅತಿಥಿಗಳು:

ಡಿ.ವಿ. ಸದಾನಂದಗೌಡ, ಕೇಂದ್ರದ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು.

ಶ್ರೀಮತಿ ನಿರ್ಮಲಾ ಸೀತಾರಾಮನ್, ಹಣಕಾಸು ಸಚಿವರು.

ಬೆಂಗಳೂರು ಸಂಚಾರ ಪೊಲೀಸರ ಸಾಧನೆಗಳ ಕೈಪಿಡಿ ಬಿಡುಗಡೆ

ಗೋವಿಂದ ಎಂ. ಕಾರಜೋಳ, ಉಪ ಮುಖ್ಯಮಂತ್ರಿಗಳು.

ಸಾರಿಗೆ ಇಲಾಖೆ ಕೈಪಿಡಿ ಬಿಡುಗಡೆ

ಡಾ. ಸಿ.ಎನ್. ಅಶ್ವತ್ಥ್ ನಾರಾಯಣ್, ಉಪ ಮುಖ್ಯಮಂತ್ರಿಗಳು.

ರಸ್ತೆ ಸುರಕ್ಷತೆ ಜಾಗೃತಿ ಕೈಪಿಡಿ "ಮೊಳಕೆಯಲ್ಲೇ ತಿದ್ದಿರಿ" ಬಿಡುಗಡೆ
ಲಕ್ಷ್ಮಣ್ ಸಂಗಪ್ಪ ಸವದಿ, ಉಪ ಮುಖ್ಯಮಂತ್ರಿಗಳು.

ದಿನಾಂಕ: 14–01–2020, ಮಂಗಳವಾರ, ಸಮಯ : ಬೆಳಿಗ್ಗೆ 9.30 ಗಂಟೆಗೆ
ಸ್ಥಳ: ಶ್ರೀ ಕಂಠೀರವ ಕ್ರೀಡಾಂಗಣ, ಕಸ್ತೂರಬಾ ರಸ್ತೆ, ಬೆಂಗಳೂರು.

2. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ ಉದ್ಘಾಟನಾ ಸಮಾರಂಭ:

ಉದ್ಘಾಟನೆ: ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು.

ಘನ ಉಪಸ್ಥಿತಿ:

ಡಿ.ವಿ. ಸದಾನಂದಗೌಡ, ಕೇಂದ್ರದ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು.

ಶ್ರೀಮತಿ ನಿರ್ಮಲಾ ಸೀತಾರಾಮನ್, ಹಣಕಾಸು ಸಚಿವರು.

ಮುಖ್ಯ ಅತಿಥಿಗಳು:

ಗೋವಿಂದ ಎಂ. ಕಾರಜೋಳ, ಉಪ ಮುಖ್ಯಮಂತ್ರಿಗಳು.

ಡಾ. ಸಿ.ಎನ್. ಅಶ್ವತ್ಥ್ ನಾರಾಯಣ್, ಉಪ ಮುಖ್ಯಮಂತ್ರಿಗಳು.

ಲಕ್ಷ್ಮಣ್ ಸಂಗಪ್ಪ ಸವದಿ, ಉಪ ಮುಖ್ಯಮಂತ್ರಿಗಳು.

ದಿನಾಂಕ: 14–01–2020, ಮಂಗಳವಾರ, ಸಮಯ: ಬೆಳಿಗ್ಗೆ 11.30 ಗಂಟೆಗೆ

ಸ್ಥಳ: ರವೀಂದ್ರ ಕಲಾಕ್ಷೇತ್ರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು.

3. ಪತ್ರಿಕಾಗೋಷ್ಠಿ:

ಗಣರಾಜ್ಯೋತ್ಸವ ಅಂಗವಾಗಿ ಲಾಲ್‌ಬಾಗ್‌ನಲ್ಲಿ ಹಮ್ಮಿಕೊಳ್ಳುವ ಫಲಪುಷ್ಪ ಪ್ರದರ್ಶನ ಕುರಿತಂತೆ

ದಿನಾಂಕ: 14–01–2020, ಮಂಗಳವಾರ, ಸಮಯ: ಅಪರಾಹ್ನ 12.00 ಗಂಟೆಗೆ

ಸ್ಥಳ: ಲಾಲ್‌ಬಾಗ್ ತೋಟಗಾರಿಕೆ ಮಾಹಿತಿ ಕೇಂದ್ರ, ಬೆಂಗಳೂರು.

4. ಪತ್ರಿಕಾಗೋಷ್ಠಿ :

ವಿ. ಸೋಮಣ್ಣ,
ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ದಿನಾಂಕ : 14-01-2020 ಮಂಗಳವಾರ ಸಮಯ : ಅಪರಾಹ್ನ 12-30 ಗಂಟೆಗೆ

ಸ್ಥಳ : ಕೊಠಡಿ ಸಂಖ್ಯೆ 313 : ಸಮಿತಿ ಕೊಠಡಿ, ಮೂರನೇ ಮಹಡಿ, ವಿಧಾನ ಸೌಧ, ಬೆಂಗಳೂರು

## ಪತ್ರಿಕಾ ಪ್ರಕಟಣೆ

# ಸೈನಿಕ ಶಾಲೆ, ಡೆಹಾರಡೂನ್ – 8 ನೇ ತರಗತಿ ಪ್ರವೇಶಕ್ಕಾಗಿ ಪರೀಕ್ಷೆ

ಬೆಂಗಳೂರು ಜನವರಿ 13 (ಕರ್ನಾಟಕ ವಾರ್ತೆ)

ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಡೆಹಾರಡೂನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್‌ನ 8 ನೇ ತರಗತಿ ಪ್ರವೇಶ ಪರೀಕ್ಷೆಗಾಗಿ ಕರ್ನಾಟಕ ರಾಜ್ಯದ ಬಾಲಕರಿಂದ ಅರ್ಜಿ ಆಹ್ವಾನಿಸಿದೆ.

ಜನವರಿ 2021 ನೇ ಸಾಲಿನ ಪ್ರವೇಶಕ್ಕಾಗಿ ಉತ್ತರಾಖಂಡ ರಾಜ್ಯದ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್‌ನಲ್ಲಿ 8 ನೇ ತರಗತಿಗಾಗಿ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕರಿಗೆ ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ 2020 ನೇ ಸಾಲಿನ ಜೂನ್ 1 ಮತ್ತು 2 ರಂದು ನಡೆಸಲಾಗುವುದು.

ಅಭ್ಯರ್ಥಿಗಳು ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶಾಲೆಯಲ್ಲಿ 7ನೇ ತರಗತಿಯಲ್ಲಿ ಓದುತ್ತಿರುವ ಅಥವಾ ಉತ್ತೀರ್ಣರಾಗಿರುವ ಹಾಗೂ 01-01-2021 ರಂತೆ ಹನ್ನೊಂದುವರೆ ವರ್ಷದಿಂದ 13 ವರ್ಷದೊಳಗಿರುವ (ಅಂದರೆ ದಿನಾಂಕ: 02-01-2008 ರಿಂದ 01-07-2009 ರೊಳಗೆ ಜನಿಸಿರುವ) ಬಾಲಕರು ಮಾತ್ರ ಸದರಿ ಪ್ರವೇಶ ಪರೀಕ್ಷೆಗೆ ಅರ್ಹರಿರುತ್ತಾರೆ.

ಈ ಸಂಸ್ಥೆಯ ಮುಖ್ಯ ಗುರಿ ಯುವಕರನ್ನು ದೇಶದ ಸಶಸ್ತ್ರ ಪಡೆಗೆ ಸೇರಲು ಸಿದ್ಧಗೊಳಿಸುವುದು ಹಾಗೂ ಈ ನಿಟ್ಟಿನಲ್ಲಿ ಯುವಕರಿಗೆ ಸರ್ವ ರೀತಿಯ ವಿದ್ಯಾಭ್ಯಾಸ/ತರಬೇತಿ ನೀಡುವುದು. ಕಾಲೇಜಿನಲ್ಲಿ ವರ್ಷವೊಂದಕ್ಕೆ ಪ್ರಸಕ್ತ ವಿದ್ಯಾಭ್ಯಾಸ ಶುಲ್ಕ ರೂ 42,400/- ಆಗಿರುತ್ತದೆ.

ಅರ್ಜಿ ನಮೂನೆ, ವಿವರಣ ಪತ್ರ ಹಾಗೂ ಹಳೇ ಪ್ರಶ್ನೆ ಪತ್ರಿಕೆಗಳಿಗಾಗಿ ನಿರ್ದೇಶಕರು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಭವನ, ನಂ 58, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ರಸ್ತೆ ಬೆಂಗಳೂರು – 560 025 ಸಂಪರ್ಕಿಸಬಹುದಾಗಿದೆ. **"THE COMMNANDANT RIMC DEHRADUN" PAYABLE AT SBI, TEL BHAVAN, DEHRADUN (BANK CODE NO. 01576)** ಇವರ ಹೆಸರಿನಲ್ಲಿ ಸೆಳೆದ ರೂ 600 (ಸಾಮಾನ್ಯ ಅಭ್ಯರ್ಥಿಗಳಿಗೆ ) ಮತ್ತು ರೂ 555/- (ಎಸ್/ಎಸ್‌ಟಿ ಅಭ್ಯರ್ಥಿಗಳಿಗೆ) ಡಿಮಾಂಡ್ (ಎಸ್‌ಸಿ/ಎಸ್‌ಟಿ ಅಭ್ಯರ್ಥಿಗಳಿಗೆ) ಡಿಮಾಂಡ್ ಡ್ರಾಫ್ಟ್ ಮೂಲಕ ಖುದ್ದಾಗಿ ಪಡೆಯಬಹುದಾಗಿದೆ.

ರಿಜಿಸ್ಟರ್ಡ್ ಪಾರ್ಸಲ್ ಮೂಲಕ ಅರ್ಜಿ ನಮೂನೆಗಳನ್ನು ಪಡೆಯಲಿಚ್ಚಸಲಿರುವ ಅಭ್ಯರ್ಥಿಗಳು ಮೇಲೆ ತಿಳಿಸಿದ ಬ್ಯಾಂಕ್ ಡ್ರಾಫ್ಟ್‌ನೊಂದಿಗೆ 11"*9" ಅಳತೆ ಸೈನಿಕ ಸ್ವವಿಳಾಸದ ಲಕೋಟೆಯ ಮೇಲೆ ರೂ 40/- ಮೌಲ್ಯದ ಅಂಚೆ ಚೀಟಿ ಲಗತ್ತಿಸಿ ಕಳುಹಿಸತಕ್ಕದ್ದು. ಲಕೋಟೆಯ ಮೇಲೆ ಅಭ್ಯರ್ಥಿಯ ಪೂರ್ಣ ಅಂಚೆ ಮತ್ತು ದೂರವಾಣಿ ಸಂಖ್ಯೆಯನ್ನು ಸ್ಪಷ್ಟವಾಗಿ ನಮೂದಿಸತಕ್ಕದು.

ಭರ್ತಿ ಮಾಡಿದ ನಿಗದಿತ ಅರ್ಜಿ ನಮೂನೆಯನ್ನು ದ್ವಿಪ್ರತಿಯಲ್ಲಿ ಕೆಳಗಿನ ಅಡಕಗಳೊಂದಿಗೆ ದಿನಾಂಕ: 31-03-2020 ರೊಳಗಾಗಿ ನಿರ್ದೇಶಕರು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಬೆಂಗಳೂರು ಈ ವಿಳಾಸಕ್ಕೆ ಸಲ್ಲಿಸಬಹುದಾಗಿದೆ.

ಮುನ್ಸಿಪಾಲಿಟಿ/ಗ್ರಾಮ ಪಂಚಾಯತ್ ಪ್ರಾಧಿಕಾರ ವತಿಯಿಂದ ಆಂಗ್ಲ ಭಾಷೆಯಲ್ಲಿ ಪಡೆದ ಅಭ್ಯರ್ಥಿಯ ಜನ್ಮ ಪ್ರಮಾಣ ಪತ್ರದ ದೃಢೀಕೃತ ಪ್ರತಿ. 5 ಪಾಸ್‌ಪೋರ್ಟ್ ಸೈಜಿನ ಭಾವಚಿತ್ರಗಳು (ಅರ್ಜಿಗಳಲ್ಲಿ ಅಂಟಿಸಿದ ಭಾವಚಿತ್ರವನ್ನು ಸೇರಿಸಿ)

ಎಸ್‌ಸಿ/ಎಸ್‌ಟಿ ಅಭ್ಯರ್ಥಿಗಳಾಗಿದ್ದಲ್ಲಿ, ಸಕ್ಷಮ ಪ್ರಾಧಿಕಾರದಿಂದ ನೀಡಿದ ಜಾತಿ ಪ್ರಮಾಣ ಪತ್ರದ ಧೃಢೀಕೃತ ಪ್ರತಿ (ಆಂಗ್ಲ ಭಾಷೆಯಲ್ಲಿ ಇರುವಂತೆ ಮಾತ್ರ) ಪರೀಕ್ಷಾ ಪ್ರವೇಶ ಪತ್ರವನ್ನು ತ್ವರಿತ/ನೊಂದಾಯಿತ ಅಂಚೆದ್ವಾರ ರವಾನಿಸಲು ರೂ 40/- ರ ಅಂಚೆ ಚೀಟಿ ಅಂಟಿಸಿದ ಸ್ವವಿಳಾಸ ಲಕೋಟೆ. ಶಾಲಾ ಪ್ರಾಚಾರ್ಯರು/ಮುಖ್ಯೋಪಾಧ್ಯಾಯರಿಂದ ಅಭ್ಯರ್ಥಿಯ ಜನ್ಮ ದಿನಾಂಕ ಮತ್ತು ಓದುತ್ತಿರುವ ತರಗತಿ ಬಗ್ಗೆ ಪಡೆದ ಪ್ರಮಾಣ ಪತ್ರದ ಮೂಲ ಪ್ರತಿ (ಧೃಢೀಕರಿಸಿದ ಅಭ್ಯಥಿಯ ಭಾವಚಿತ್ರದೊಂದಿಗೆ). ಈ ರಾಜ್ಯದ ವಾಸಸ್ಥಾನ ಧೃಢೀಕರಣದ ಪತ್ರ (ತಹಸೀಲ್ದಾರರಿಂದ) ಪಡೆದು ಅರ್ಜಿಯೊಂದಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080-25589459 ಅಥವಾ ಸಮೀಪದಲ್ಲಿರುವ ತಮ್ಮ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಪ್ರಕಟಣೆ ತಿಳಿಸಿದೆ.

## ಜನವರಿ 30 ರಂದು ಹುತಾತ್ಮರ ದಿನ ಆಚರಣೆ

ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)

ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಜ್ಞಾಪಕಾರ್ಥವಾಗಿ ಜನವರಿ 30 ರಂದು ಹುತಾತ್ಮರ ದಿನದ ಅಂಗವಾಗಿ ಪೂರ್ವಾಹ್ನ 11.00 ಗಂಟೆಗೆ 2 ನಿಮಿಷ ಮೌನ ಆಚರಿಸಲು ಸರ್ಕಾರದ ಅಧಿಕೃತ ಪ್ರಕಟಣೆ ತಿಳಿಸಿದೆ.

## Applications are invited for admission to Rashtriya Indian Military College (RIMC)

**Bengaluru, January 13 (Karnataka Information)**

**Applications are invited from Boys of Karnataka for admission to Rashtriya Indian Military College (RIMC) Dehradun (Uttarakand) for Jan 2020 Term. The Entrance Examination for the same will be conducted in Bengaluru on 01 and 02 June 2020. Candidates appearing for the above test should not be less than 11 1/2 years in age but should not have attained the age of 13 years as on 01 January 2020. The boy should either be studying in Class VII or passed Class VII. The fee is Rs. 42,400/- per year.**

**The prospectus-cum-application form and booklet of old question papers can be obtained personally/Registered Post by sending a written request from the Director, Department of Sainik Welfare and Resettlement, Field Marshal KM Cariappa Bhavan, 58, Field Marshal KM Cariappa Road, Bengaluru 25. For further details contact 080-25589459 or your nearest District Sainik Welfare and Resettlement offices says official press release.**

**ನಂದಿನಿ ಹೊಸ ಉತ್ಪನ್ನ ಬಿಡುಗಡೆ**

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

**ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾ ಮಂಡಳಿ ನಿಯಮಿತ ನಂದಿನಿ ಹೊಸ ಉತ್ಪನ್ನಗಳನ್ನು ಜನವರಿ 16 ರಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಬಿಡುಗಡೆ ಮಾಡಲಿದ್ದಾರೆ.**

**ನಗರದ ಐ.ಟಿ.ಸಿ. ವಿಂಡ್ಸರ್ ಹೋಟೆಲ್‌ನಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಗೃಹ ಮತ್ತು ಸಹಕಾರ ಸಚಿವ ಬಸವರಾಜ್ ಬೊಮ್ಮಾಯಿ, ಪಶುಸಂಗೋಪನೆ ಸಚಿವ ಪ್ರಭು ಬಿ. ಚವ್ಹಾಣ್, ಕೆ.ಎಂ.ಎಫ್ ಅಧ್ಯಕ್ಷ ಬಾಲಚಂದ್ರ ಲ ಜಾರಕಿಹೊಳಿ ಅವರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.**

## ಗ್ರಾಹಕ ಸಂವಾದ ಸಭೆ

**ಬೆಂಗಳೂರು, ಜನವರಿ 13 (ಕರ್ನಾಟಕ ವಾರ್ತೆ)**

ಬೆಂಗಳೂರು ವಿದ್ಯುತ್ ಕಂಪನಿ ವ್ಯಾಪ್ತಿಗೆ ಒಳಪಡುವ ಎಲ್ಲಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3:00 ರಿಂದ ಸಂಜೆ 5:30 ರವರಗೆಗ್ರಾಹಕ ಸಂವಾದ ಸಭೆಗಳನ್ನು ನಡೆಸಲಾಗುತ್ತಿದೆ. ಸದರಿ ಸಭೆಯಲ್ಲಿಗ್ರಾಹಕರು ಪಾಲ್ಗೊಂಡುತಮ್ಮ ವಿದ್ಯುತ್ ಸಂಬಂಧಿತಸಮಸ್ಯೆಗಳನ್ನು ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ.

ಅದರನ್ವಯ, ಈ ತಿಂಗಳ ಗ್ರಾಹಕ ಸಂವಾದ ಸಭೆ ದಿನಾಂಕ 18.01.2020ರಂದು ಬೆವಿಕಂನ ಎಲ್ಲಾ ಉಪವಿಭಾಗಗಳಲ್ಲಿ ನಡೆಯಲಿದ್ದು, ಗ್ರಾಹಕರು ಈ ಸಭೆಯ ಸದುಪಯೋಗ ಪಡೆಯಬೇಕಾಗಿ ಪ್ರಕಟಣೆ ತಿಳಿಸಿದೆ.

## Customer Interaction Meetings (CIM)

**Bengaluru, January 13 (Karnataka Information)**

Customer Interaction Meetings (CIM) are being conducted at all Sub Divisions of BESCOM on third Saturday of every month from 3.00pm to 5.30pm. In the said Meeting (CIM), Customers are requested to attended and get your electricity related issues resolved having one to one interaction with concerned BESCOM official.

In this regard the scheduled for the CIM for the month of January on 18.01.2020. In this regard all the esteemed consumers are requested to participate and make use of the opportunity in redressal of complaints says official press release.